Akashvani : Bangalore
Regional Bulletin In Kannada

21.10.2025 / 2.30 pm
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

21.10.2025 / 2.30 pm
<><*<><>*><>
ಮುಖ್ಯಾಂಶಗಳು

೧. ಪೊಲೀಸ್ ಸಂಸ್ಮರಣಾ ದಿನದ ಸಂದರ್ಭದಲ್ಲಿಂದು ಹುತಾತ್ಮ ಪೊಲೀಸರಿಗೆ ನಾಡಿನಾದ್ಯಂತ ಗೌರವ ನಮನ

೨. ಒಂದು ಲಕ್ಷ ೨೦ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಬೆಂಗಳೂರು ನಗರ ಮೂಲಸೌಕರ್ಯ ಅಭಿವೃದ್ಧಿ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಹಬ್ಬದ ಅವಧಿಯಲ್ಲಿ ಕೆಎಂಎಫ್‌ನಿಂದ ಒಂದು ಸಾವಿರದ ಒಂದುನೂರು ಮೆಟ್ರಿಕ್ ಟನ್ ದಾಖಲೆಯ ಸಿಹಿ ಉತ್ಪನ್ನ ಮಾರಾಟ

೪. ನಾಡಿನಾದ್ಯಂತ ದೀಪಾವಳಿ ಲಕ್ಷ್ಮೀ ಪೂಜೆ ಸಂಭ್ರಮ; ಬಲಿಪಾಡ್ಯಮಿಗೆ ಸಿದ್ಧತೆ

೫. ಹಾಸನಾಂಬೆ ವಾರ್ಷಿಕ ದರ್ಶನ ಅವಧಿ ನಾಳೆ ಮುಕ್ತಾಯ

><><><><><

ಪೊಲೀಸ್ ಸಂಸ್ಮರಣಾ ದಿನದ ಸಂದರ್ಭದಲ್ಲಿಂದು ಹುತಾತ್ಮ ಪೊಲೀಸರಿಗೆ ನಾಡಿನಾದ್ಯಂತ ಗೌರವ ನಮನ ಸಲ್ಲಿಸಲಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಬೆಂಗಳೂರು ನಗರ ಸಶಸ್ತ್ರ ಮೀಸಲು ಪಡೆ ಕೇಂದ್ರ ಕಚೇರಿಯಲ್ಲಿಂದು ಪೊಲೀಸ್ ಹುತಾತ್ಮರಿಗೆ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಒಂದು ವರ್ಷದಲ್ಲಿ ರಾಜ್ಯದ ೮ ಮಂದಿ ಸೇರಿದಂತೆ ಒಟ್ಟು ೧೯೧ ಮಂದಿ ಪೊಲೀಸ್ ಸಿಬ್ಬಂದಿ ಹುತಾತ್ಮರಾಗಿದ್ದಾರೆ. ಇವರ ತ್ಯಾಗ ಬಲಿದಾನಕ್ಕೆ ಬೆಲೆಕಟ್ಟಲಾಗದು ಎಂದರು. ಪೊಲೀಸ್ ಇಲಾಖೆ ಶಾಂತಿ, ಸುವ್ಯವಸ್ಥೆ ಕಾಪಾಡಿದರೆ ರಾಜ್ಯದ ಅಭಿವೃದ್ಧಿ ಸಾಧ್ಯವಾಗುತ್ತದೆ. ಪೊಲೀಸ್ ಇಲಾಖೆಯ ಉತ್ತಮ ಕಾರ್ಯದಿಂದಾಗಿ ಮಾದಕವಸ್ತು ಹಾವಳಿಗೂ ತಡೆಬಿದ್ದಿದೆ. ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ನಿರ್ವಹಿಸಬೇಕಿದೆ ಎಂದರು.

****ಧ್ವನಿ****ಮುಖ್ಯಮಂತ್ರಿ

><><><><><

ಸಮಾಜದ ರಕ್ಷಣೆಗಾಗಿ ಜೀವ ಬಲಿದಾನ ಮಾಡಿದ ಪೊಲೀಸ್ ಹುತಾತ್ಮರ ಬಗ್ಗೆ ಗೌರವ ಭಾವನೆ ಹೊಂದಬೇಕು ಎಂದು ಬಳ್ಳಾರಿ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಹೇಳಿದರು. ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಬಳ್ಳಾರಿ ಪೊಲೀಸ್ ಕವಾಯತು ಮೈದಾನದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ೧೯೫೮ರಲ್ಲಿ ಲಡಾಖ್‌ನ ಹಾಟ್ ಸ್ಪ್ರಿಂಗ್‌ನಲ್ಲಿ ಚೀನಾ ಸೈನಿಕರೊಂದಿಗೆ ನಡೆದ ಘರ್ಷಣೆಯಲ್ಲಿ ಪ್ರಾಣ ತ್ಯಾಗ ಮಾಡಿದ ಪೊಲೀಸ್ ಅಧಿಕಾರಿಗಳ ಗೌರವಾರ್ಥ ಪೊಲೀಸ್ ಸಂಸ್ಮರಣಾ ದಿನ ಆಚರಿಸಲಾಗುತ್ತಿದೆ ಎಂದರು.

><><><><

ಆರೋಗ್ಯ ಪೂರ್ಣ ಸಮಾಜ ನಿರ್ಮಾಣದಲ್ಲಿ ಪೊಲೀಸರ ಸೇವೆ ಶ್ಲಾಘನೀಯ ಎಂದು ಪೂರ್ವ ವಲಯ ಪೊಲೀಸ್ ಮಹಾನಿರೀಕ್ಷಕ ಡಾ.ರವಿಕಾಂತೇಗೌಡ ಹೇಳಿದರು. ದಾವಣಗೆರೆ ಜಿಲ್ಲಾ ಪೊಲೀಸ್ ಕವಾಯತು ಮೈದಾನದಲ್ಲಿಂದು ಹಮ್ಮಿಕೊಂಡಿದ್ದ ಹುತಾತ್ಮ ಪೊಲೀಸ್ ದಿನಾಚರಣೆ ಉದ್ಘಾಟಿಸಿ ಮಾತನಾಡಿದ ಅವರು, ಗಡಿ ಕಾಯುವ ಸೈನಿಕರ ಕರ್ತವ್ಯದಷ್ಟೆ ಆಂತರಿಕ ಭದ್ರತೆ ಕಾಪಾಡುವ ಪೊಲೀಸರ ಕರ್ತವ್ಯವೂ ಅಷ್ಟೇ ಮುಖ್ಯವಾದುದು ಎಂದರು.

><><><><

ಬಾಗಲಕೋಟೆಯ ನವನಗರದ ಪೊಲೀಸ್ ಪರೇಡ್ ಮೈದಾನದಲ್ಲಿ ಆಯೋಜಿಸಲಾಗಿದ್ದ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ ಪೊಲೀಸ್ ಹುತಾತ್ಮರಿಗೆ ಗೌರವ ಸಲ್ಲಿಸಿದರು. ಪೊಲೀಸ್ ಹುತಾತ್ಮರು, ತ್ಯಾಗ, ಧೈರ್ಯ ಮತ್ತು ಕರ್ತವ್ಯನಿಷ್ಠೆಯ ಪ್ರತೀಕವಾಗಿದ್ದಾರೆ. ಸಮಾಜದ ನೆಮ್ಮದಿಗಾಗಿ ಅವರು ಮಾಡಿದ ತ್ಯಾಗ ಸ್ಮರಣೀಯ ಎಂದರು.

><><><><

ಬೆಂಗಳೂರಿನ ಚಿಕ್ಕಪೇಟೆಯ ಆಧುನೀಕರಣ ಮತ್ತು ಗಾಂಧಿನಗರ ಕ್ಷೇತ್ರಗಳ ರಸ್ತೆಗಳ ವೈಟ್‌ಟಾಪಿಂಗ್ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಗುದ್ದಲಿ ಪೂಜೆ ನೆರವೇರಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ಒಂದು ಲಕ್ಷದ ೧೦ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಬೆಂಗಳೂರು ನಗರವನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಹೊಸ ಹೊರ ವರ್ತುಲ ರಸ್ತೆ, ಮೇಲ್ಸೇತುವೆ, ಡಬಲ್ ಡೆಕ್ಕರ್ ರಸ್ತೆ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಬೆಂಗಳೂರಿನ ಮೆಟ್ರೋಗೆ ರಾಜ್ಯ ಸರ್ಕಾರ ಶೇಕಡ ೮೭ರಷ್ಟು ಹಣ ನೀಡುತ್ತಿದೆ. ಜಿಎಸ್‌ಟಿ ಬದಲಾವಣೆಯಿಂದ ರಾಜ್ಯಕ್ಕೆ ೧೫ ಸಾವಿರ ಕೋಟಿ ರೂಪಾಯಿಗಳಷ್ಟು ನಷ್ಟವಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

><><><><

ಕರ್ನಾಟಕ ಹಾಲು ಮಹಾಮಂಡಳಿ ಸಂಸ್ಥೆ ಮತ್ತು ಸದಸ್ಯ ಹಾಲು ಒಕ್ಕೂಟಗಳು ಹಬ್ಬದ ಅವಧಿಯಲ್ಲಿ ಒಟ್ಟಾರೆ ಒಂದು ಸಾವಿರದ ಒಂದು ನೂರು ಮೆಟ್ರಿಕ್ ಟನ್ ಸಿಹಿ ಉತ್ಪನ್ನಗಳನ್ನು ಮಾರಾಟ

ಮಾಡುವ ಮೂಲಕ ೪೬ ಕೋಟಿ ರೂಪಾಯಿಗಳ ದಾಖಲೆ ವಹಿವಾಟು ನಡೆಸಿದೆ ಎಂದು ಪಶುಸಂಗೋಪನಾ ಸಚಿವ ಕೆ. ವೆಂಕಟೇಶ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಂದಿನಿ ಬ್ರ್ಯಾಂಡ್ ಅಡಿ ಲಭ್ಯವಿರುವ ೪೦ಕ್ಕೂ ಹೆಚ್ಚು ಸಿಹಿ ಉತ್ಪನ್ನಗಳನ್ನು ಮಾರಾಟ ಮಾಡಲಾಗಿದೆ. ಕಳೆದ ವರ್ಷದ ದಸರಾ ಮತ್ತು ದೀಪಾವಳಿ ಹಬ್ಬದ ಅವಧಿಯಲ್ಲಿ ೭೨೫ ಮೆಟ್ರಿಕ್ ಟನ್ ಸಿಹಿ ಉತ್ಪನ್ನಗಳನ್ನು ಮಾರಾಟ ಮಾಡಿ, ೩೩ ಕೋಟಿ ೪೮ ಲಕ್ಷ ರೂಪಾಯಿ ವಹಿವಾಟು ದಾಖಲಿಸಲಾಗಿತ್ತು ಎಂದು ತಿಳಿಸಿದ್ದಾರೆ. ರಾಜ್ಯದಲ್ಲಿ ರೈತರಿಂದ ಪ್ರತಿ ದಿನ ಸರಾಸರಿ ಒಂದು ಕೋಟಿ ಲೀಟರ್ ಹಾಲು ಸಂಗ್ರಹಿಸಲಾಗುತ್ತಿದ್ದು, ಇದರಲ್ಲಿ ಸುಮಾರು ೬೫ ಲಕ್ಷ ಲೀಟರ್ ಹಾಲು, ಮೊಸರು ಹಾಗೂ ಇತರ ಹಾಲು ಉತ್ಪನ್ನಗಳನ್ನು ಮಾರುಕಟ್ಟೆಗೆ ತಲುಪಿಸಲಾಗುತ್ತಿದೆ. ನಂದಿನಿ ಬ್ರ್ಯಾಂಡ್ ಅಡಿ ಹಾಲಿನೊಂದಿಗೆ ತುಪ್ಪ, ಬೆಣ್ಣೆ, ಪನ್ನೀರ್, ಸಿಹಿ ತಿನಿಸು, ಹಾಲಿನ ಪುಡಿ ಪಾನೀಯ ಸೇರಿದಂತೆ ೧೭೫ಕ್ಕೂ ಅಧಿಕ ಬಗೆಯ ಉತ್ಪನ್ನಗಳನ್ನು ನೆರೆಯ ಆಂಧ್ರಪ್ರದೇಶ, ತೆಲಂಗಾಣ, ಗೋವಾ, ಕೇರಳ ಹಾಗೂ ದೆಹಲಿ, ಅಸ್ಸಾಂ ಮತ್ತು ಕೆಲ ಹೊರದೇಶಗಳ ಮಾರುಕಟ್ಟೆಗಳಲ್ಲಿ ಮಾರಾಟ ಮಾಡಲಾಗುತ್ತಿದೆ ಎಂದು ಸಚಿವ ವೆಂಕಟೇಶ್ ತಿಳಿಸಿದರು.

><><><><

ರಾಜ್ಯಾದ್ಯಂತ ದೀಪಾವಳಿ ಲಕ್ಷ್ಮೀ ಪೂಜೆಯನ್ನು ಸಡಗರ ಸಂಭ್ರಮದಿಂದ ಆಚರಿಸಲಾಗುತ್ತಿದೆ. ನಾಳಿನ ಬಲಿಪಾಡ್ಯಮಿಗಾಗಿ ಉತ್ಸಾಹದ ಸಿದ್ಧತೆಗಳು ನಡೆದಿವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ದೀಪಾವಳಿ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಗುತ್ತಿದೆ. ದೀಪಾವಳಿ ಅಮಾವಾಸ್ಯೆಯ ದಿನವಾದ ಇಂದು ಲಕ್ಷ್ಮೀ ಪೂಜೆ ಆಚರಣೆ ನಡೆಯಿತು. ವಿಶೇಷವಾಗಿ ವರ್ತಕರು ಲಕ್ಷ್ಮೀ ಪೂಜೆಯನ್ನು ಮಾಡಿ ಸಿಹಿ ಹಂಚುತ್ತಿರುವ ದೃಶ್ಯ ಸಾಮಾನ್ಯವಾಗಿತ್ತು. ಜೈನ ಸಮುದಾಯದವರು ಈ ದಿನವನ್ನು ಹೊಸ ವರ್ಷವನ್ನಾಗಿ ಆಚರಿಸುತ್ತಿದ್ದಾರೆ. ದೇವಾಲಯಗಳಲ್ಲಿ ವಿಶೇಷ ಅಲಂಕಾರ ಹಾಗೂ ಪೂಜಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಸುಪ್ರೀಂಕೋರ್ಟ್ ಆದೇಶದಂತೆ ಮಾಲಿನ್ಯಕರ ಪಟಾಕಿ ಮಾರಾಟ ನಿಷೇಧಿಸಲಾಗಿದ್ದು, ಹಸಿರು ಪಟಾಕಿಗಳಿಗೆ ಆದ್ಯತೆ ನೀಡಲಾಗುತ್ತಿದೆ. ಯಾದಗಿರಿ ನಗರ ಸೇರಿದಂತೆ ಜಿಲ್ಲೆಯಾದ್ಯಂತ ಬೆಳಕಿನ ಹಬ್ಬವಾದ ದೀಪಾವಳಿ ಸಂಭ್ರಮ ಕಳೆಕಟ್ಟಿದೆ. ಸಾರ್ವಜನಿಕರು ಸಂಭ್ರಮದಿಂದ ಹಬ್ಬ ಆಚರಿಸಲು ಮಾರುಕಟ್ಟೆಯಲ್ಲಿ ಖರೀದಿಯ ಭರಾಟೆ ಜೋರಾಗಿದೆ. ಗ್ರಾಮೀಣ ಭಾಗದಿಂದ ಬೈಕ್, ಆಟೋಗಳಲ್ಲಿ ಆಗಮಿಸಿದ ಜನರು ಬಟ್ಟೆ, ಪಟಾಕಿ, ಹೂವು, ಹಣ್ಣು ಖರೀದಿಸಿದರು. ಕೆಲವು ವರ್ತಕರು ನಿನ್ನೆಯೇ ಲಕ್ಷ್ಮಿ ಪೂಜೆ ಯನ್ನು ನೆರವೇರಿಸಿ ಪಟಾಕಿ ಸಿಡಿಸಿದ ಸಂಭ್ರಮಿಸಿದರು.

><><><><

ಹಾಸನದಲ್ಲಿ ನಿನ್ನೆಯವರೆಗೆ ಸುಮಾರು ೨೩ ಲಕ್ಷ ಜನರು ಹಾಸನಾಂಬೆಯ ದರ್ಶನ ಪಡೆದಿದ್ದಾರೆ. ಕಳೆದ ವರ್ಷ ಒಟ್ಟು ೧೭ ಲಕ್ಷ ೪೬ ಸಾವಿರ ಜನ ದರ್ಶನ ಪಡೆದಿದ್ದರು. ಹಾಸನಾಂಬೆ ವಾರ್ಷಿಕ ದರ್ಶನ

ಅವಧಿ ನಾಳೆಗೆ ಮುಕ್ತಾಯಗೊಳ್ಳಲಿದೆ. ಇಂದು ಸರದಿ ಸಾಲಿನ ಪ್ರವೇಶ ದ್ವಾರಗಳು ರಾತ್ರಿ ೯ ಗಂಟೆಗೆ ಮುಚ್ಚಲ್ಪಡುತ್ತವೆ ಮತ್ತು ದರ್ಶನ ಮಧ್ಯರಾತ್ರಿ ೧೨ ಗಂಟೆಗೆ ನಿಲ್ಲುತ್ತದೆ. ನಾಳೆ ದರ್ಶನ ಬೆಳಗ್ಗೆ ೫ ಗಂಟೆಯಿಂದ  ಆರಂಭವಾಗಿ ಸಂಜೆ ೭ ಗಂಟೆಗೆ ಮುಗಿಯುತ್ತದೆ. ನಂತರ ಸಾರ್ವಜನಿಕ ದರ್ಶನಕ್ಕೆ ಅವಕಾಶವಿರುವುದಿಲ್ಲ.

><><><><

ಉತ್ತರ ಕನ್ನಡ ಜಿಲ್ಲೆಯಲ್ಲಿ ಡಿಸೆಂಬರ್ ೧೪ ರಂದು ನಡೆಯುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ೮ ಸಾವಿರ ಸಂಖ್ಯೆಯ ರಾಜಿಯಾಗಬಹುದಾದ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಇತ್ಯರ್ಥ ಪಡಿಸುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಮಾಯಣ್ಣ ಬಿ.ಎಲ್. ಹೇಳಿದ್ದಾರೆ.  ಅವರು ಕಾರವಾರದ ಜಿಲ್ಲಾ ನ್ಯಾಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ಜಿಲ್ಲೆಯಲ್ಲಿ ಪ್ರಸ್ತುತ ವಿವಿಧ ಹಂತದ ನ್ಯಾಯಾಲಯಗಳಲ್ಲಿ ೩೯ ಸಾವಿರದ ೭೮೮ ಪ್ರಕರಣಗಳು ಬಾಕಿ ಇದ್ದು, ಇದರಲ್ಲಿ ಆರು ಸಾವಿರ ಪ್ರಕರಣಗಳನ್ನು ಕಕ್ಷಿಗಾರರಿಗೆ ಹೊರೆಯಾಗದಂತೆ ಲೋಕ ಅದಾಲತ್ ಮೂಲಕ ಶೀಘ್ರವಾಗಿ ಇತ್ಯರ್ಥ ಮಾಡುವ ಗುರಿ ಹೊಂದಲಾಗಿದೆ. ಕಳೆದ ಬಾರಿ ನಡೆದ ಲೋಕ್ ಅದಾಲತ್‌ನಲ್ಲಿ ೫ ಸಾವಿರದ ೨೦೨ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ತಿಳಿಸಿದರು.

><><><><